ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಕಲಬುರಗಿ ಜಿಲ್ಲೆಯಲ್ಲಿ ಕೃಷಿ ಭೂಮಿಯನ್ನು ಕೃಷಿಯೇತರಗೊಳಿಸಿರುವ ಬಗ್ಗೆ

ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

299 (275) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯಲ್ಲಿ ಕೃಷಿ ಭೂಮಿ ಮತ್ತು ಕೃಷಿಯೇತರ ಭೂಮಿ ಎಷ್ಟು ಹೆಕ್ಟೇರ್ ಇದೆ ; (ಕಲಬುರಗಿ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ 03 ವರ್ಷಗಳಿಂದ ಕಲಬುರಗಿ ಜಿಲ್ಲೆಯಲ್ಲಿ ಎಷ್ಟು ಅಕ್ರಮ ಲೇಔಟ್‌ಗಳನ್ನು ನಿರ್ಮಿಸಲಾಗಿರುತ್ತದೆ ; ಮತ್ತು ಅಕ್ರಮ ಲೇಔಟ್ ನಿರ್ಮಿಸಿದವರ ವಿರುದ್ಧ ಕೈಗೊಂಡ ಕ್ರಮಗಳೇನು ;

(ಇ) ಕೃಷಿ ಭೂಮಿಯನ್ನು ಕೃಷಿಯೇತರಗೊಳಿಸದೇ ನಿವೇಶನಗಳನ್ನು ನಿರ್ಮಿಸಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅದನ್ನು ತಡೆಗಟ್ಟಲು ಕೈಗೊಂಡ ಕ್ರಮಗಳೇನು;

(ಈ) ಕಳೆದ 03 ವರ್ಷಗಳಿಂದ ಕಲಬುರಗಿ ಜಿಲ್ಲೆಯಲ್ಲಿ ಕೃಷಿ ಭೂಮಿಯನ್ನು ಕೃಷಿಯೇತರಗೊಳಿಸದೇ ಎಷ್ಟು ನಿವೇಶನಗಳನ್ನು ಮಾರಾಟ ಮಾಡಲಾಗಿರುತ್ತದೆ ?